ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMI0ACM2/20/2023

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:02-06-2023.

**-:: ಸು ತ್ತೋಲೆ ::-**

**ವಿಷಯ:** **2023-24ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:** ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ.DTE-ADMI0ACM2/17/2023, ದಿ:08-05-2023. & ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:18-05-2023.

*********

ಉಲ್ಲೇಖಿತ ಈ ಕಛೇರಿ ಸುತತೋಲೆಯಲ್ಲಿ 2023-24ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ (ಅನುದಾನಿತ ಕೋರ್ಸುಗಳು)ಪೂರ್ಣಾವಧಿಯ ಇಂಜಿನಿಯರಿಂಗ್ ಮತ್ತು ನಾನ್-ಇಂಜಿನಿಯರಿಂಗ್ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇಲೆ ಪ್ರವೇಶ ಪಡೆಯಲು ದಿನಾಂಕ:03-06-2023 ಕೊನೆಯ ದಿನಾಂಕವಾಗಿ ನಿಗಧಿಪಡಿಸಲಾಗಿತ್ತು.

ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಖಾಲಿ ಉಳಿದಿರುವ ಸೀಟುಗಳಿಗೆ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಸಂಸ್ಥೆಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಿ ಪ್ರವೇಶ ಪಡೆಯಲು **ದಿನಾಂಕ:20-06-2023ರವರೆಗೆ** ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

ವಿ.ಸೂ:- ಅರ್ಜಿ ಸ್ವೀಕೃತಿಗೆ ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೂ ಮೊದಲೇ ಎಲ್ಲಾ ಸೀಟುಗಳು ಭರ್ತಿಯಾದಲ್ಲಿ ಆ ನಂತರ ಯಾವುದೇ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ (ಅನುದಾನಿತ ಕೋರ್ಸುಗಳಲ್ಲಿ) ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. **ಪ್ರಯುಕ್ತ, ಇದನ್ನು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

***"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"***

K.G. 02/06/23
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

*ರಾಜ್ಯದ ಸರ್ಕಾರಿ / ಅನುದಾನಿತ - ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ* ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ ದಿ:20-06-2023ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

<u>ಪ್ರತಿ ಮಾಹಿತಿಗಾಗಿ:-</u>

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ.
4) ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ,
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
6) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ.ಆರ್.ಎಸ್ ವಿಭಾಗಕ್ಕೆ – ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
8) ಇ-ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
9) ಕಡತಕ್ಕೆ.